# ವಿಧಾನಸೌಧಕ್ಕೆ ಸ್ವಾಮೀಜಿ ಭೇಟಿ ಸರಿಯಲ್ಲ

ಧಾರವಾಡ: ಸ್ವಾಮೀಜಿಗಳು ಸಮಾಜಕ್ಕೆ ಮಾದರಿ. ಅವರು ಮಠ ಬಿಟ್ಟು ವಿಧಾನಸೌಧದಲ್ಲಿ ಕಾಣಿಸಿಕೊಳ್ಳುವುದು ಸರಿಯಲ್ಲ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇತ್ತೀಚೆಗೆ ನಾನು ನೋಡಿದಂತೆ ಬಹುತೇಕ ಸ್ವಾಮೀಜಿಗಳು ವಿಧಾನಸೌಧದಲ್ಲಿಯೇ ಇರುತ್ತಾರೆ. ಇದು ಸರಿಯಾದ ಬೆಳವಣಿಗೆಯಲ್ಲ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಸ್ವಾಮೀಜಿಗಳು ರಾಜಕಾರಣಕ್ಕೆ ಬರಲಿ ಎಂದು ಯಾವ ಅರ್ಥದಲ್ಲಿ ಹೇಳಿದ್ದಾರೆ ಗೊತ್ತಿಲ್ಲ. ಚುನಾವಣೆಯಲ್ಲಿ ಮತ ಚಲಾವಣೆ ಮಾಡುವವರು ಬುದ್ಧಿವಂತರಾಗುವವರೆಗೂ ಒಳ್ಳೆಯ ಸರಕಾರ ಬರಲು ಸಾಧ್ಯವಿಲ್ಲ. ಇಂದಿನ ದಿನಗಳಲ್ಲಿ ರಾಜಕಾರಣ ಬಹಳ ಕಲುಷಿತವಾಗಿದೆ. ಪ್ರಜಾಪ್ರಭುತ್ವದಲ್ಲಿ ತಮ್ಮ ಹಕ್ಕು ಚಲಾಯಿಸುವ ಅನೇಕರಿಗೆ ಕರ್ತವ್ಯದ ಬಗ್ಗೆ ಅರಿವು ಇಲ್ಲವಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು. ಯಡಿಯೂರಪ್ಪ ಪಕ್ಷಾತೀತ ನಾಯಕ. ಹೋರಾಟದಿಂದಲೇ ಬೆಳೆದು ನಾಲ್ಕು ಸಾರಿ ಸಿಎಂ ಆಗಿ ಸಾಕಷ್ಟು ಅನುಭವ ಹೊಂದಿದ್ದಾರೆ. ಇತ್ತೀಚಿನ ಅಧಿವೇಶನದಲ್ಲಿ ಬರೀ ತಿಕ್ಕಾಟ ನಡೆದಿವೆ ಹೊರತು ಅಭಿವೃದ್ಧಿ ಬಗ್ಗೆ ಯಾವ ಪಕ್ಷದವರೂ ಮಾತನಾಡುತ್ತಿಲ್ಲ. ಒಬ್ಬರ ಮೇಲೆ ಒಬ್ಬರು ಟೀಕೆ ಮಾಡುವುದನ್ನು ಬಿಟ್ಟು ಜನ ಕಲ್ಯಾಣ, ರಾಜ್ಯದ ಅಭಿವೃದ್ಧಿಗಾಗಿ ಆರೋಗ್ಯಕರ ಚರ್ಚೆ ನಡೆಸಲು ಪ್ರಯತ್ನಿಸಬೇಕು ಎಂದರು.

# ಸ್ವಾಮೀಜಿಗಳಿಗೆ ರಾಜಕಾರಣ ಸಲ್ಲದು

**ವಿಕ ಸುದ್ದಿಲೋಕ** ಧಾರವಾಡ

ಸ್ವಾಮೀಜಿಗಳು ಮಠ ಬಿಟ್ಟು ವಿಧಾನಸೌಧದಲ್ಲಿ ಕಾಣಿಸಿಕೊಳ್ಳುವುದು ಸರಿಯಲ್ಲ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಸಮಾಧಾನ ವ್ಯಕ್ತಪಡಿಸಿದರು.



ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿ, ''ಸ್ವಾಮೀಜಿಗಳನ್ನು ರಾಜಕೀಯಕ್ಕೆ ಆಹ್ವಾನಿಸಿದ ನಡೆ ಬಗ್ಗೆ ಭಾರಿ ಚರ್ಚೆಗಳು ನಡೆಯುತ್ತಿವೆ. ಇದು ಉತ್ತಮ ಬೆಳವಣಿಗೆ ಅಲ್ಲ ಎಂದು ಸ್ವತಃ ಬಿಜೆಪಿ ನಾಯಕರೇ ಅಭಿಪ್ರಾಯ ಪಟ್ಟಿದ್ದಾರೆ. ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಸ್ವಾಮೀಜಿಗಳು ರಾಜಕಾರಣಕ್ಕೆ ಬರಲಿ ಎಂದು ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ,'' ಎಂದರು.

''ಇತ್ತೀಚೆಗೆ ನಾನು ನೋಡಿದ್ದಂತೆ ಬಹುತೇಕ ಸ್ವಾಮೀಜಿಗಳು ವಿಧಾನಸೌಧದಲ್ಲಿಯೇ ಇರುತ್ತಾರೆ. ಇದು ಸರಿಯಲ್ಲ. ಚುನಾವಣೆಯಲ್ಲಿ ಮತ ಚಲಾವಣೆ ಮಾಡುವವರು ಬುದ್ಧಿವಂತರಾಗುವವರೆಗೂ ದೇಶ, ರಾಜ್ಯದಲ್ಲಿ ಒಳ್ಳೆ ಸರಕಾರ ಬರಲು ಸಾಧ್ಯವಿಲ್ಲ. ಇಂದಿನ ದಿನಗಳಲ್ಲಿ ರಾಜಕಾರಣ ಬಹಳ ಕಲುಷಿತವಾಗಿದೆ. ಪ್ರಜಾಪ್ರಭುತ್ವದಲ್ಲಿ ತಮ್ಮ ಹಕ್ಕು ಚಲಾಯಿಸುವ ಅನೇಕರಿಗೆ ಕರ್ತವ್ಯದ ಬಗ್ಗೆ ಅರಿವು ಇಲ್ಲವಾಗಿದೆ,'' ಎಂದು ಬೇಸರ ವ್ಯಕ್ತಪಡಿಸಿದರು.

**ಬಿಎಸ್‌ವೈ ಪಕ್ಷಾತೀತ ನಾಯಕ:** ''ಯಡಿಯೂರಪ್ಪ ಪಕ್ಷಾತೀತ ನಾಯಕ. ಹೋರಾಟದಿಂದಲೇ ಬೆಳೆದಿದ್ದಾರೆ. ಇತ್ತೀಚಿನ ಅಧಿವೇಶನಗಳಲ್ಲಿ ಬರೀ ಜಟಾಪಟಿ ನಡೆದಿದೆಯೇ ಹೊರತು ಅಭಿವೃದ್ಧಿ ಬಗ್ಗೆ ಯಾವ ಪಕ್ಷದವರೂ ಮಾತನಾಡುತ್ತಿಲ್ಲ, ಒಬ್ಬರ ಮೇಲೆ ಒಬ್ಬರು ಟೀಕೆ ಬಿಟ್ಟು ಜನರ ಕಲ್ಯಾಣ, ರಾಜ್ಯದ ಅಭಿವೃದ್ಧಿಗಾಗಿ ಆರೋಗ್ಯಕರ ಚರ್ಚೆ ನಡೆಸಲು ಪ್ರಯತ್ನಿಸಬೇಕು. ವೈಯಕ್ತಿಕ ವಿಚಾರ ಬಿಟ್ಟು ರಾಜ್ಯ, ಜನರ ಸುಧಾರಣೆಗೆ ಪ್ರಯತ್ನಿಸಬಹುದಿತ್ತು. ಮುಂದಿನ ದಿನಗಳಲ್ಲಿ ಅಧಿಕಾರಕ್ಕೆ ಬರುವ ಸರಕಾರ ಒಳ್ಳೆಯ ವಾತಾವರಣ ನಿರ್ಮಾಣ ಮಾಡಲಿ,'' ಎಂದು ಆಶಿಸಿದರು.

# ಕನ್ನಡದಲ್ಲಿ ತೀರ್ಪು ನೀಡುವ ನಿಯಮ ಜಾರಿಗೆ ಬರಲಿದೆ

## ರಾಜ್ಯಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ ಉದ್ಘಾಟಿಸಿದ ಬಸವರಾಜ ಹೊರಟ್ಟಿ




ಕಾರ್ಯಕ್ರಮದ ಉದ್ಘಾಟಿಸಿದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ನ್ಯಾಯಾಂಗದಲ್ಲಿ ಹೆಚ್ಚಾಗಿ ಕನ್ನಡ ಬಳಸಬೇಕು. ಮುಂದಿನ ದಿನಗಳಲ್ಲಿ ಕನ್ನಡದಲ್ಲಿ ತೀರ್ಪು ನೀಡುವ ನಿಯಮ ಜಾರಿಗೆ ತರಲಾಗುವುದು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ಇಲ್ಲಿನ ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವತಿಯಿಂದ ವಿವಿ ಸಭಾಂಗಣದಲ್ಲಿ ಶನಿವಾರ 2 ದಿನಗಳ ಕಾಲ ಆಯೋಜಿಸಲಾಗಿದ್ದ 10ನೇ ರಾಜ್ಯಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಭಾಷೆಯಲ್ಲಿ ತೀರ್ಪು ಬಂದರೆ ಕಕ್ಷಿದಾರರಿಗೆ ಅನುಕೂಲವಾಗುತ್ತದೆ. ತೀರ್ಪಿನಲ್ಲಿ ಏನಿದೆ ಎಂಬುದನ್ನು ಕಕ್ಷಿದಾರರು ಸಲೀಸಾಗಿ ತಿಳಿದುಕೊಳ್ಳಬಹುದಾಗಿದೆ. ಆದಕಾರಣ ಕನ್ನಡದಲ್ಲೇ ತೀರ್ಪು ಬರುವಂತಾಗಬೇಕು. ಈ ನಿಟ್ಟಿನಲ್ಲಿ ನಿಯಮ ಜಾರಿಗೊಳಿಸಬೇಕಿದೆ. ಮುಂಬರುವ ದಿನಗಳಲ್ಲಿ ಈ ಬಗ್ಗೆ ನಿಯಮ ಜಾರಿಗೆ ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ವಕೀಲರಾಗುವವರು ಗೊತ್ತಿಲ್ಲದ ಹೊಸ ವಿಷಯಗಳನ್ನು ಕಲಿಯುವುದರ ಜತೆಗೆ ವೃತ್ತಿಯಲ್ಲಿ ಹೆಚ್ಚು ಕನ್ನಡ ಬಳಸಬೇಕು. ಆ ಮೂಲಕ ಮಾತೃಭಾಷಾ ಪ್ರೇಮ ಮೆರೆಯಬೇಕು ಎಂದು ಕಿವಿಮಾತು ಹೇಳಿದರು.

ಇಂದು ಬೆಂಗಳೂರಿನಲ್ಲಿ ಕನ್ನಡ ಮಾತನಾಡುವವರ ಸಂಖ್ಯೆ ಬರೀ ಶೇ. 24ರಷ್ಟಾಗಿದೆ. ರಾಜಧಾನಿದಲ್ಲೇ ಕನ್ನಡ ಮಾತನಾಡುವವರ ಸಂಖ್ಯೆ ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿರುವುದು ಕಳವಳಕಾರಿ. ಕನ್ನಡಿಗರು ಉದಾರಿಗಳಾಗಿರುವುದರಿಂದ ಭಾಷೆಗೆ ಈ ಪರಿಸ್ಥಿತಿ ಬಂದಿದೆ. ನಮ್ಮ ಭಾಷೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ. ಹೀಗಾಗಿ, ರಾಜ್ಯದಲ್ಲಿ ಕನ್ನಡ ಕಡ್ಡಾಯ ಎಂದು ಬಿಲ್ ಪಾಸು ಮಾಡಲಾಗಿದೆ ಎಂದರು.

25 ವರ್ಷದ ಹಿಂದೆ ಶಾಸನಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಕೀಲರು ಇರುತ್ತಿದ್ದರು. ಉತ್ತಮ ಚರ್ಚೆಯಾಗುತ್ತಿದ್ದವು. ಈಗ ಅಂಥವರ ಸಂಖ್ಯೆ ಕಡಿಮೆಯಾಗಿದೆ. ನಾನು ಕಾನೂನು ಪದವಿ ಓದುತ್ತಿದ್ದಾಗ 2ನೇ ವರ್ಷದಲ್ಲಿ ಅನುತ್ತೀರ್ಣನಾದೆ. ಹೀಗಾಗಿ, ಪದವಿ ಪಡೆಯಲು ಸಾಧ್ಯವಾಗಲಿಲ್ಲ. ಕಾನೂನು ಮಂತ್ರಿಯಾಗಿದ್ದಾಗ ನ್ಯಾಯಾಂಗಕ್ಕೆ ಸಂಬಂಧಿಸಿದಂತಹ ಅನೇಕ ವಿಷಯಗಳನ್ನು ತಿಳಿದುಕೊಂಡೆ ಎಂದು ಮಂತ್ರಿಯಾದಾಗಿನ ಕ್ಷಣ ಮೆಲುಕು ಹಾಕಿದರು.

ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿ ಡಾ. ಸಿ. ಬಸವರಾಜು ಮಾತನಾಡಿ, ಕಲ್ಪಿತ ನ್ಯಾಯಾಲಯ ಸ್ಪರ್ಧೆ ಮೂಲಕ ವಿದ್ಯಾರ್ಥಿಗಳನ್ನು ಉತ್ತಮ ನ್ಯಾಯವಾದಿಗಳು, ನ್ಯಾಯಾಧೀಶರನ್ನಾಗಿ ರೂಪಿಸಲಾಗುತ್ತಿದೆ. ವಕೀಲರಾಗುವ ವಿದ್ಯಾರ್ಥಿಗಳು ಸಮಾಜದ ಬದಲಾವಣೆ ಹಾಗೂ ಸಮಸ್ಯೆಗೆ ಸ್ಪಂದಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಜನಪರ ಸೇವೆ ಮಾಡಬೇಕು. ನ್ಯಾಯಾಲಯದಲ್ಲಿ ಕನ್ನಡ ಬಳಕೆ ಹೆಚ್ಚಾಗಬೇಕಿದೆ. ಚರ್ಚೆ, ತೀರ್ಪು ಕನ್ನಡದಲ್ಲಿಯೇ ಆಗಬೇಕು ಎಂದು ಅಭಿಪ್ರಾಯಿಸಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಮೊಹಮದ್ ಝುಬೇರ ಎನ್., ಡಾ. ರತ್ನಾ ಆರ್. ಭರಮಗೌಡರ, ಹಿರಿಯ ವಕೀಲರಾದ ಪ್ರೊ. ಸಿ.ಎಸ್. ಪಾಟೀಲ, ಬಸವಪ್ರಭು ಹೊಸಕೇರಿ ಹಾಗೂ ಅಧ್ಯಾಪಕರು, ರಾಜ್ಯದ ವಿವಿಧ ಭಾಗಗಳ ಸುಮಾರು 39 ಕಾಲೇಜುಗಳ ಕಾನೂನು ವಿದ್ಯಾರ್ಥಿಗಳು ಭಾಗವಹಿಸಿದ್ದರು. ವಿವಿಯ ಡೀನ್ ಡಾ. ಜಿ.ಬಿ. ಪಾಟೀಲ ಸ್ವಾಗತಿಸಿದರು. ವಿದ್ಯಾರ್ಥಿನಿಯರಾದ ಪ್ರಮತಿ ಹುಣಸಗಿ ಪ್ರಾರ್ಥಿಸಿ, ಸ್ಫೂರ್ತಿ ಬಸಾಪೂರ ನಿರೂಪಿಸಿದರು.

### ಪ್ರಾಮಾಣಿಕ ಸೇವೆ ನೀಡಿ

ಪ್ರಾಮಾಣಿಕವಾಗಿ ಮಾತನಾಡುವವರು ಇಂದು ರಾಜಕೀಯ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಮೂರ್ಖರೆನಿಸಿಕೊಳ್ಳುತ್ತಿದ್ದಾರೆ. ಅದಕ್ಕೆಲ್ಲ ತಲೆಕೆಡಿಸಿಕೊಳ್ಳದೆ, ದೇಶದ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕವಾದ ಸೇವೆ ನೀಡಬೇಕಾಗಿದೆ. ಆ ನಿಟ್ಟಿನಲ್ಲಿ ಕಾಯ್ದೆ, ಕಾನೂನುಗಳನ್ನು ಸರಿಯಾಗಿ ತಿಳಿದುಕೊಳ್ಳಬೇಕು. ವಿದ್ಯಾರ್ಥಿಗಳು ತಮ್ಮ ಭವಿಷ್ಯ ರೂಪಿಸಿಕೊಳ್ಳುವ ಜತೆಗೆ ರಾಜ್ಯ, ರಾಷ್ಟ್ರವನ್ನು ಪ್ರತಿನಿಧಿಸುವ ನ್ಯಾಯಾಧೀಶರಾಗಿ ಬೆಳೆಯಬೇಕು ಎಂದು ಬಸವರಾಜ ಹೊರಟ್ಟಿ ಸಲಹೆ ನೀಡಿದರು.

# ಮತದಾರರು ಬುದ್ಧಿವಂತರಾದಾಗ ಒಳ್ಳೆಯ ಸರ್ಕಾರ

• **ಕನ್ನಡಪ್ರಭ ವಾರ್ತೆ** ಧಾರವಾಡ

ಚುನಾವಣೆ ಬಂದಾಗ ಬೇರೆ ಏನೇ ಇರಬಹುದು, ಆದರೆ ಅಧಿವೇಶನ ನಡೆದಾಗ ಒಬ್ಬರ ಮೇಲೆ ಒಬ್ಬರು ಕಿತ್ತಾಟ ನಡೆದಿರುವುದೇ ಜಾಸ್ತಿ. ಮುಂದಿನ ದಿನಗಳಲ್ಲಾದರೂ ಅಧಿವೇಶನದಲ್ಲಿ ಒಳ್ಳೆಯ ವಾತಾವರಣ ನಿರ್ಮಾಣವಾಗಲಿ. ಮತದಾರರು ಬುದ್ಧಿವಂತರಾದಾಗ ಮಾತ್ರ ಒಳ್ಳೆಯ ಸರ್ಕಾರ ಬರುತ್ತದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 6 ತಿಂಗಳಿಂದ ನೋಡಿದ್ದೇನೆ. ಅಭಿವೃದ್ಧಿ ಬಗ್ಗೆ ಯಾವ ಪಕ್ಷವೂ ಮಾತನಾಡುವುದಿಲ್ಲ. ಅವರನ್ನು ಇವರು ಬೈಯುವುದು. ಇವರನ್ನು ಅವರು ಬೈಯುವುದು ಮಾಮೂಲಿ ಎಂಬಂತಾಗಿದೆ. ಈ ರೀತಿ ರಾಜಕಾರಣಿಗಳು ಟೀಕೆ ಟಿಪ್ಪಣಿ ಬಿಟ್ಟು ರಾಜ್ಯದ ಅಭಿವೃದ್ಧಿಗಾಗಿ ಪ್ರಯತ್ನ ಪಡಬೇಕು ಎಂದು ಕಿವಿಮಾತು ಹೇಳಿದರು.

ನಿನ್ನೆಯ ನಂತರ ಅಧಿವೇಶನ ಮುಗಿತು. ಕ್ರೀಡೆ ಮುಗಿಯುವ ಮುನ್ನ ಸೋತವರು ಹಾಗೂ ಗೆದ್ದವರು ಹೇಗೆ ಕೈ ಮಿಲಾಯಿಸುತ್ತಾರೋ ಅದೇ ರೀತಿ ಮಿಲಾಯಿಸುತ್ತಾರೆ. ಇದು ಒಳ್ಳೆಯ ರೂಢಿ. ಆದರೆ, ರಾಜ್ಯದ ಸುಧಾರಣೆ ಬಗ್ಗೆ ವೈಯಕ್ತಿಕ ಟೀಕೆ ಬಿಟ್ಟು ಪ್ರಯತ್ನ ಮಾಡಬೇಕಿತ್ತು. ಈಗಲಾದರೂ ಎಲ್ಲರೂ ತಿಳಿದುಕೊಂಡು ಮುಂದಿನ ದಿನಗಳಲ್ಲಿ ಸರ್ಕಾರ ಬಂದಾಗ ಒಳ್ಳೆಯ ವಾತಾವರಣ ನಿರ್ಮಾಣ ಆಗಲಿ ಎಂದು ಹಾರೈಸುತ್ತೇನೆ ಎಂದ ಅವರು, ಇಂದಿನ ದಿನಗಳಲ್ಲಿ ರಾಜಕಾರಣ ಬಹಳ ಕಲುಷಿತವಾಗಿದೆ. ಪ್ರಜಾಪ್ರಭುತ್ವದಲ್ಲಿ ತಮ್ಮ ಹಕ್ಕು ಚಲಾಯಿಸುವ ಅನೇಕರಿಗೆ ಕರ್ತವ್ಯದ ಬಗ್ಗೆ ಅರಿವು ಇಲ್ಲವಾಗಿದೆ ಎಂದರು.

ಮಹದಾಯಿ ವಿಚಾರ ಚುನಾವಣೆ ಸಮಯದಲ್ಲಿ ಮುನ್ನೆಲೆಗೆ ಬರುವುದು ಸಾಮಾನ್ಯವಾಗಿದೆ. ಕೇಂದ್ರ ಸರ್ಕಾರ ಅನುಮತಿ ನೀಡಿದ ಬೆನ್ನಲ್ಲೇ ಗೋವಾ ಕ್ಯಾತೆ ತೆಗೆದು ಕೋರ್ಟ್ ಮೆಟ್ಟಿಲೇರುತ್ತದೆ. ವಿನಾಕಾರಣ ಕಾನೂನು ತೊಡಕು ಉಂಟು ಮಾಡುವ ಕೆಲಸ ಮಾಡುತ್ತಿದೆ. ಆದರೆ ಈ ಬಾರಿ ನೀರು ಬರಲಿದೆ ಎಂಬ ಭರವಸೆ ಇದೆ. ನೀರು ಬಂದರೆ ಈ ಸಮಸ್ಯೆಗೆ ಪರಿಹಾರ ಸಿಕ್ಕಂತಾಗುತ್ತದೆ ಎಂದರು.

ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಸ್ವಾಮೀಜಿಗಳು ರಾಜಕಾರಣಕ್ಕೆ ಬರಲಿ ಎಂದು ಯಾವ ಅರ್ಥದಲ್ಲಿ ಹೇಳಿದ್ದಾರೆ ಗೊತ್ತಿಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ ಅವರು, ಮಠದ ಸ್ವಾಮಿಗಳು ಎಲ್ಲರಿಗೂ ಮಾದರಿ. ಸ್ವಾಮೀಜಿಗಳು ಮಠ ಬಿಟ್ಟು ವಿಧಾನಸೌಧದಲ್ಲಿ ಕಾಣಿಸಿಕೊಳ್ಳುವುದು ಸರಿಯಲ್ಲ. ಆದರೆ ಇದನ್ನು ಎಲ್ಲ ಸ್ವಾಮೀಜಿಗಳು ಕೇಳಬೇಕಲ್ಲ ಎಂದು ಅಸಹಾಯಕತೆ ವ್ಯಕ್ತಪಡಿಸಿದರು.

> **ಮಹದಾಯಿ ವಿಚಾರ ಚುನಾವಣೆ ಸಮಯದಲ್ಲಿ ಮುನ್ನೆಲೆಗೆ ಬರುವುದು ಸಾಮಾನ್ಯವಾಗಿದೆ. ಕೇಂದ್ರ ಸರ್ಕಾರ ಅನುಮತಿ ನೀಡಿದ ಬೆನ್ನಲ್ಲೇ ಗೋವಾ ಕ್ಯಾತೆ ತೆಗೆದು ಕೋರ್ಟ್ ಮೆಟ್ಟಿಲೇರುತ್ತದೆ. ವಿನಾಕಾರಣ ಕಾನೂನು ತೊಡಕು ಉಂಟು ಮಾಡುವ ಕೆಲಸ ಮಾಡುತ್ತಿದೆ. ಆದರೆ ಈ ಬಾರಿ ನೀರು ಬರಲಿದೆ ಎಂಬ ಭರವಸೆ ಇದೆ. ನೀರು ಬಂದರೆ ಈ ಸಮಸ್ಯೆಗೆ ಪರಿಹಾರ ಸಿಕ್ಕಂತಾಗುತ್ತದೆ.**
>
> • **ಬಸವರಾಜ ಹೊರಟ್ಟಿ** ಸಭಾಪತಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

# ವಿಧಾನಸೌಧದಲ್ಲಿ ಸ್ವಾಮೀಜಿಗಳು ಬೇಡ

**ಧಾರವಾಡ:** ಮಠದ ಸ್ವಾಮೀಜಿಗಳು ಎಲ್ಲರಿಗೂ ಮಾದರಿ. ಅವರು ಮಠ ಬಿಟ್ಟು ವಿಧಾನಸೌಧದಲ್ಲಿ ಕಾಣಿಸಿಕೊಳ್ಳುವುದು ಸರಿಯಲ್ಲ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಸ್ವಾಮೀಜಿಗಳು ರಾಜಕಾರಣಕ್ಕೆ ಬರಲಿ ಎಂದು ಯಾವ ಅರ್ಥದಲ್ಲಿ ಹೇಳಿದ್ದಾರೆ ಗೊತ್ತಿಲ್ಲ ಎಂದರು.

ಅಧಿವೇಶನದಲ್ಲಿ ಬರೀ ತಿಕ್ಕಾಟ ನಡೆದಿದೆ ಹೊರತು ಅಭಿವೃದ್ಧಿ ಬಗ್ಗೆ ಯಾವ ಪಕ್ಷದವರೂ ಮಾತನಾಡುತ್ತಿಲ್ಲ. ಒಬ್ಬರನ್ನು ಒಬ್ಬರು ಟೀಕೆ ಮಾಡುವುದನ್ನು ಬಿಟ್ಟು ಜನರ ಕಲ್ಯಾಣ, ರಾಜ್ಯದ ಅಭಿವೃದ್ಧಿಗಾಗಿ ಆರೋಗ್ಯಕರ ಚರ್ಚೆ ನಡೆಸಲು ಪ್ರಯತ್ನಿಸಬೇಕು. ವೈಯಕ್ತಿಕ ವಿಚಾರ ಬಿಟ್ಟು ರಾಜ್ಯ, ಜನರ ಪರಿಸ್ಥಿತಿ ಸುಧಾರಣೆಗೆ ಇನ್ನಷ್ಟು ಪ್ರಯತ್ನಿಸಬಹುದಿತ್ತು. ಮುಂದಿನ ದಿನಗಳಲ್ಲಿ ಅಧಿಕಾರಕ್ಕೆ ಬರುವ ಸರ್ಕಾರ ಒಳ್ಳೆ ವಾತಾವರಣ ನಿರ್ಮಿಸಲಿ ಎಂದು ಹೇಳಿದರು. ಮಹದಾಯಿ ವಿಚಾರ ಚುನಾವಣೆ ಸಮಯದಲ್ಲಿ ಮುನ್ನಲೆಗೆ ಬರುವುದು ಸಾಮಾನ್ಯವಾಗಿದೆ. ಕೇಂದ್ರ ಸರ್ಕಾರ ಅನುಮತಿ ನೀಡಿದ ಬೆನ್ನಲ್ಲೆ ಗೋವಾ ಖ್ಯಾತೆ ತೆಗೆದು ಕೋರ್ಟ್ ಮೆಟ್ಟಿಲೇರುತ್ತದೆ. ವಿನಾಕಾರಣ ಕಾನೂನು ತೊಡಕು ಉಂಟು ಮಾಡುತ್ತಿದೆ. ಆದರೆ ಈ ಬಾರಿ ನೀರು ಬರಲಿದೆ ಎಂಬ ಭರವಸೆ ಇದೆ. ನೀರು ಬಂದರೆ ಈ ಸಮಸ್ಯೆಗೆ ಪರಿಹಾರ ಸಿಕ್ಕಂತಾಗುತ್ತದೆ ಎಂದರು.  ಮತದಾರರು ಬುದ್ಧಿವಂತರಾಗುವವರೆಗೂ ದೇಶ, ರಾಜ್ಯದಲ್ಲಿ ಪ್ರಬುದ್ಧ ಸರ್ಕಾರ ಬರಲು ಸಾಧ್ಯವಿಲ್ಲ. ಇಂದಿನ ದಿನಗಳಲ್ಲಿ ರಾಜಕಾರಣ ಬಹಳ ಕಲುಷಿತವಾಗಿದೆ. ಪ್ರಜಾಪ್ರಭುತ್ವದಲ್ಲಿ ಹಕ್ಕು ಚಲಾಯಿಸುವ ಅನೇಕರಿಗೆ ಕರ್ತವ್ಯದ ಬಗ್ಗೆ ಅರಿವು ಇಲ್ಲವಾಗಿದೆ ಎಂದು ಹೊರಟ್ಟಿ ಕಳವಳ ವ್ಯಕ್ತಪಡಿಸಿದರು.

Hubli Edition
Feb 26, 2023 Page No. 7

ವಿಜಯವಾಣಿ
ನಂ 1 ಕನ್ನಡ ದಿನಪತ್ರಿಕೆ

## ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ ಉದ್ಘಾಟಿಸಿ ಹೊರಟ್ಟಿ ಸಲಹೆ

# ಜನರ ವಿಶ್ವಾಸ ಉಳಿಸಿಕೊಳ್ಳಲು ಯತ್ನಿಸಲಿ

ಹುಬ್ಬಳ್ಳಿ: ಮುಂದೆ ನೀವು ವಕೀಲರಾದ ನಂತರ ಜನರು ನಂಬಿಕೆ, ಭರವಸೆ ಇಟ್ಟುಕೊಂಡು ನಿಮ್ಮ ಹತ್ತಿರ ಬರುತ್ತಾರೆ. ಅವರ ನಂಬಿಕೆ ಉಳಿಸಿಕೊಳ್ಳುವ ಪ್ರಯತ್ನ ಮಾಡಿ ದೇಶದ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕ ಸೇವೆ ನೀಡಬೇಕು ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಇಲ್ಲಿಯ ನವನಗರದ ರಾಜ್ಯ ಕಾನೂನು ವಿಶ್ವವಿದ್ಯಾಲಯ ವತಿಯಿಂದ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ 10ನೇ ರಾಜ್ಯ ಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಬೇರೆ ಬೇರೆ ವಿಷಯಗಳನ್ನು ಕಲಿಯುವ ಆಸಕ್ತಿ ಬೆಳೆಸಿಕೊಳ್ಳಬೇಕು. ಕನ್ನಡ ಕಡ್ಡಾಯ ಬಿಲ್ ಪಾಸ್ ಮಾಡಲಾಗಿದೆ. ಕನ್ನಡದಲ್ಲಿ ತೀರ್ಪು ಕೊಡುವ ನಿಯಮಗಳನ್ನು ಜಾರಿಗೆ ತರಲಾಗುವುದು. ಇದರಿಂದ ಕಕ್ಷಿದಾರರಿಗೆ ಅನುಕೂಲವಾಗಲಿದೆ ಎಂದರು.

ವಿಶ್ವವಿದ್ಯಾಲಯದ ಕುಲಪತಿ ಡಾ. ಸಿ. ಬಸವರಾಜು ಅಧ್ಯಕ್ಷತೆ ವಹಿಸಿ ಮಾತನಾಡಿ, ಕಲ್ಪಿತ ನ್ಯಾಯಾಲಯ ಸ್ಪರ್ಧೆ ನ್ಯಾಯಾಧೀಶರಾಗಿ ರೂಪುಗೊಳ್ಳಲು ಸಹಾಯಕವಾಗಲಿದೆ. ಉತ್ತಮ ನ್ಯಾಯವಾದಿಗಳಾಗಲು ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಸಮಾಜದಲ್ಲಿನ ಸಮಸ್ಯೆಗಳಿಗೆ ಹೇಗೆ ಸ್ಪಂದಿಸುತ್ತೀರಿ ಎಂಬುದನ್ನು ಕಲಿಯಬಹುದು ಎಂದರು. ವಿಶ್ವವಿದ್ಯಾಲಯದ ಕುಲಸಚಿವ ಮಹಮದ್ ಝುಬೇರ, ಮೌಲ್ಯಮಾಪನ ಕುಲಸಚಿವೆ ಡಾ. ರತ್ನಾ ಭರಮಗೌಡರ, ಪ್ರೊ. ಸಿ.ಎಸ್. ಪಾಟೀಲ, ಬಸವಪ್ರಭು ಹೊಸಕೇರಿ, ಹಾಜರಿದ್ದರು.

ಪ್ರಮತಿ ಹುಣಸಗಿ ಪ್ರಾರ್ಥಿಸಿದರು. ಡೀನ್ ಡಾ. ಜಿ.ಬಿ. ಪಾಟೀಲ ಸ್ವಾಗತಿಸಿದರು. ಸ್ಫೂರ್ತಿ ಬಸಾಪೂರ ನಿರೂಪಿಸಿದರು.




ಹುಬ್ಬಳ್ಳಿಯಲ್ಲಿರುವ ಕಾನೂನು ವಿಶ್ವವಿದ್ಯಾಲಯದಲ್ಲಿ ಶನಿವಾರ ಏರ್ಪಡಿಸಿದ್ದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆಯನ್ನು ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು. ಡಾ. ಸಿ. ಬಸವರಾಜು, ಮಹ್ಮದ ಜುಬೇರ್, ಡಾ. ರತ್ನಾ ಭರಮಗೌಡರ, ಡಾ. ಜಿ.ಬಿ. ಪಾಟೀಲ ಇದ್ದರು.

Hubli Edition
Feb 26, 2023 Page No. 7
Powered by : eReleGo.com

ವಿಜಯವಾಣಿ
ನಂ 1
ಕನ್ನಡ ದಿನಪತ್ರಿಕೆ

### ರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ ನೀಡಿ ಬಸವರಾಜ ಹೊರಟ್ಟಿ ಅಭಿಪ್ರಾಯ

# ಕ್ರಾಂತ್ರಿಕಾರಿ ಮಹನೀಯರನ್ನು ಸ್ಮರಿಸಲಿ




ಧಾರವಾಡ ಕರ್ನಾಟಕ ವಿಶ್ವ ವಿದ್ಯಾಲಯದಲ್ಲಿ ಏರ್ಪಡಿಸಿದ್ದ ರಾಷ್ಟ್ರೀಯ ಸಮ್ಮೇಳನವನ್ನು ಬಸವರಾಜ ಹೊರಟ್ಟಿ ಉದ್ಘಾಟಿಸಿದರು. ಅರುಣ ಜೋಶಿ, ಪ್ರೊ. ಕೆ.ಬಿ. ಗುಡಸಿ, ಸುಭಾಷ್ಚಂದ್ರ ನಾಟೀಕಾರ, ಕಲ್ಮೇಶ ಹಾವೇರಿಪೇಟ, ಪ್ರೊ. ಪಿ.ಜಿ. ಜೋಗದಂಡ, ಡಾ. ಮಹದೇವ ಹೆಗ್ಗಣ್ಣವರ, ಕಾಂತರಾಜು, ಇತರರು ಇದ್ದರು.

■ ವಿಜಯವಾಣಿ ಸುದ್ದಿಜಾಲ ಧಾರವಾಡ

ಸಮಾಜದಲ್ಲಿ ತುಳಿತಕ್ಕೊಳಗಾದ ಸಮುದಾಯಗಳನ್ನು ಸಮಾಜದ ಮುಖ್ಯವಾಹಿನಿಗೆ ತರುವ ಅಗತ್ಯವಿದೆ. ಸಮಾಜದ ಅಭಿವೃದ್ಧಿಗೆ ಕ್ರಾಂತಿ ಮಾಡಿದ ಮಹನೀಯರನ್ನು ಸದಾ ಸ್ಮರಿಸಬೇಕು ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಡಾ. ಬಿ.ಆರ್. ಅಂಬೇಡ್ಕರ್ 131ನೇ ಜನ್ಮದಿನ ನಿಮಿತ್ತ ಕವಿವಿ ಸುವರ್ಣ ಮಹೋತ್ಸವ ಭವನದಲ್ಲಿ ಏರ್ಪಡಿಸಿರುವ 3 ದಿನಗಳ ರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸರ್ಕಾರ ಬುಡಕಟ್ಟು ಮತ್ತು ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಕೋಟ್ಯಂತರ ರೂ. ವ್ಯಯಿಸುತ್ತಿದ್ದರೂ ಅವರ ಸ್ಥಿತಿ ಹಾಗೇ ಇದೆ. ಈ ನಿಟ್ಟಿನಲ್ಲಿ ಚರ್ಚೆಗಳು ನಡೆಯಬೇಕು. ಸಮ್ಮೇಳನದ ಚರ್ಚೆ ಮತ್ತು ಚಿಂತನ ಮಂಥನದ ಅಂಶಗಳನ್ನು ಕ್ರೋಢೀಕರಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸೂಚಿಸಬೇಕು ಎಂದರು.

ಆಶಯ ಭಾಷಣ ಮಾಡಿದ ಮುಂಬೈ ವಿವಿಯ ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಪಿ.ಜಿ. ಜೋಗದಂಡ, ಅಂಬೇಡ್ಕರ್ ದೇಶದ ಕೃಷಿ, ನೀರಾವರಿ, ಆರ್ಥಿಕ ಮತ್ತು ಸಾಮಾಜಿಕ, ಕಾನೂನು ಸೇರಿ ಎಲ್ಲ ಕ್ಷೇತ್ರದ ಸಮಸ್ಯೆಗಳಿಗೆ ಪರಿಹಾರ ಸೂಚಿಸಿದ್ದಾರೆ ಎಂದರು.

ಹಿರಿಯ ವಕೀಲ ಅರುಣ ಜೋಶಿ, ಶಾಸಕ ಅರವಿಂದ ಬೆಲ್ಲದ, ಕವಿವಿ ಕುಲಪತಿ ಪ್ರೊ. ಕೆ.ಬಿ. ಗುಡಸಿ ಮಾತನಾಡಿದರು. ಅಂಬೇಡ್ಕರ್ ಕುರಿತು ಪುಸ್ತಕ ಮತ್ತು ಸಂಶೋಧನಾ ನಿಯತ ಕಾಲಿಕೆಗಳನ್ನು ಬಿಡುಗಡೆ ಮಾಡಲಾಯಿತು. ಕೆಪಿಎಸ್‌ಸಿ ಸದಸ್ಯ ಡಾ. ಮಹದೇವ ಹೆಗ್ಗಣ್ಣವರ, ಬುಡಕಟ್ಟು ಕಲ್ಯಾಣ ಇಲಾಖೆ ನಿರ್ದೇಶಕ ಕಾಂತರಾಜು, ಡಾ. ಈ. ವೆಂಕಟಯ್ಯ, ಎಂ. ವೆಂಕಟಸ್ವಾಮಿ, ಮಾವಳ್ಳಿ ಶಂಕರ, ಡಾ. ಎನ್. ಮೂರ್ತಿ, ಚಳವಳಿ ರಾಜಣ್ಣ, ಸಿರಿಗೇರಿ ತಿಪ್ಪೇಶ, ಮುಕುಂದರಾವ ಭವಾನಿಮಠ, ವಿಠ್ಠಲ ವಗ್ಗಣ್ಣವರ, ಡಾ. ಸದಾಶಿವ ಮರ್ಜಿ, ಕವಿವಿ ಮೌಲ್ಯಮಾಪನ ಕುಲಸಚಿವ ಪ್ರೊ. ಸಿ. ಕೃಷ್ಣಮೂರ್ತಿ, ಡಾ. ಎಲ್. ಶ್ರೀನಿವಾಸ, ಸಿಂಡಿಕೇಟ್ ಸದಸ್ಯ ಡಾ. ಕಲ್ಮೇಶ ಹಾವೇರಿಪೇಟ, ಇತರರು ಇದ್ದರು.

ಕವಿವಿ ಅಂಬೇಡ್ಕರ ಅಧ್ಯಯನ ಪೀಠದ ಸಂಯೋಜಕ ಡಾ. ಸುಭಾಷ್ಚಂದ್ರ ನಾಟೀಕಾರ ಸ್ವಾಗತಿಸಿದರು. ಟಿ.ಟಿ. ಬಸವನಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. ದಮನಿತ ಜಾತಿಗಳ ಮತ್ತು ಬುಡಕಟ್ಟು ಸಮುದಾಯಗಳ ಕಡೆಗೆ ಸಾಮಾಜಿಕ ನ್ಯಾಯ, ಸಂವಿಧಾನಿಕ ಸುರಕ್ಷತೆಗಳು ಹಾಗೂ ಸಮಗ್ರ ವಿಧಾನ ಮತ್ತು ಸಮಕಾಲಿನ ಭಾರತೀಯ ಸಮಾಜದಲ್ಲಿ ದಮನಿತ ಜಾತಿಗಳ ಮತ್ತು ಬುಡಕಟ್ಟು ಸಮುದಾಯಗಳ ಸಮೀಕರಣದ ಮೂಲಭೂತ ಸಮಸ್ಯೆ ಕುರಿತು ನಗರದ ಕರ್ನಾಟಕ ವಿಶ್ವ ವಿದ್ಯಾಲಯದ ಡಾ. ಅಂಬೇಡ್ಕರ್ ಅಧ್ಯಯನ ವಿಭಾಗ, ರಾಜ್ಯ ಸರ್ಕಾರದ ಬುಡಕಟ್ಟು ಕಲ್ಯಾಣ ಇಲಾಖೆ, ಮೈಸೂರಿನ ರಾಜ್ಯ ಬುಡಕಟ್ಟು ಸಂಶೋಧನ ಸಂಸ್ಥೆ ಮತ್ತು ಕವಿವಿ ಮಾನವ ಶಾಸ್ತ್ರ ವಿಭಾಗಗಳ ಸಹಯೋಗದಲ್ಲಿ ಸಮ್ಮೇಳನ ಆಯೋಜಿಸಲಾಗಿದೆ.

ಸಂಯುಕ್ತ ಕರ್ನಾಟಕ

# ಕನ್ನಡದಲ್ಲಿ ವಾದ ಮಂಡಿಸುವುದು ನಾಡು–ನುಡಿ ಅಭಿಮಾನದ ಸಂಕೇತ

ಹುಬ್ಬಳ್ಳಿ: ಭಾವಿ ವಕೀಲರು ಕನ್ನಡದಲ್ಲಿ ವಾದ ಮಂಡನೆಯ ಪ್ರಾವೀಣ್ಯ ಪಡೆದುಕೊಳ್ಳಬೇಕು. ನ್ಯಾಯಾಲಯದೊಳಗೆ ಕನ್ನಡದಲ್ಲಿ ವಾದ ಮಂಡನೆ ಮಾಡುವುದು ನಾಡು–ನುಡಿ ಅಭಿಮಾನದ ಸಂಕೇತ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಇಲ್ಲಿನ ಕಾನೂನು ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ–2023 ಉದ್ಘಾಟಿಸಿ ಮಾತನಾಡಿದರು. ನ್ಯಾಯಾಲಯದಲ್ಲಿ ಕನ್ನಡದಲ್ಲಿ ವಾದ ಮಂಡನೆ ಮಾಡುವುದರಿಂದ ಎಲ್ಲರಿಗಿಂತ ಕಕ್ಷಿದಾರರಿಗೆ ಹೆಚ್ಚು ಅನುಕೂಲವಾಗುತ್ತದೆ. ಪ್ರಕರಣ ಕುರಿತ ವಿಷಯ ಅರ್ಥೈಸಿಕೊಳ್ಳಲು ಸಾಧ್ಯವಾಗುತ್ತದೆ. ಕನ್ನಡದಲ್ಲಿ ವಾದ ಮಂಡನೆ ಆರಂಭಿಕವಾಗಿ ಕಷ್ಟವಾಗಬಹುದು. ಆದರೆ, ಆಸಕ್ತಿಯಿಂದ ರೂಢಿಸಿಕೊಂಡರೆ ಸಾಧ್ಯವಾಗುತ್ತದೆ. ಕಾನೂನು ವಿದ್ಯಾರ್ಥಿಗಳು ಭವಿಷ್ಯದ ವೃತ್ತಿ ಜೀವನದಲ್ಲೂ ಅನುಸರಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾನೂನು ವಿವಿ ಕುಲಪತಿ ಡಾ.ಸಿ.ಬಸವರಾಜು ಮಾತನಾಡಿ, ಉತ್ತಮ ವಕೀಲರನ್ನು ರೂಪಿಸುವುದು ವಿವಿಯ ಕರ್ತವ್ಯ. ಈ ದಿಶೆಯಲ್ಲಿ ವಿಭಿನ್ನ ಕಾರ್ಯಕ್ರಮ ಆಯೋಜಿಸಿಕೊಂಡು ಬರುತ್ತಿದೆ. ಅದರ ಭಾಗವಾಗಿ ಈ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆಯೂ ಒಂದು ಎಂದರು. ಕಾನೂನು ವಿವಿ ಕುಲಸಚಿವ (ಆಡಳಿತ ವಿಭಾಗ) ಮೊಹಮದ್ ಜುಬೇರ್. ಮೌಲ್ಯ ಮಾಪನ ವಿಭಾಗದ ಕುಲಸಚಿವರಾದ ಡಾ.ರತ್ನಾ ಆರ್. ಭರಮಗೌಡರ ವೇದಿಕೆಯಲ್ಲಿದ್ದರು. ಕಾನೂನು ವಿವಿ ಡೀನ್ ಡಾ.ಜಿ.ಬಿ ಪಾಟೀಲ ಸ್ವಾಗತಿಸಿದರು.




ಕರ್ನಾಟಕ ರಾಜ್ಯಮಟ್ಟದ 'ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ–2023' ಉದ್ಘಾಟಿಸಿದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿದರು.

ಸಂಯುಕ್ತ ಕರ್ನಾಟಕ

## ಅಂಬೇಡ್ಕರ್ ವಸ್ತು ಸಂಗ್ರಹಾಲಯ ನಿರ್ಮಾಣಕ್ಕೆ ಸರಕಾರದಿಂದ 28 ಕೋಟಿ ರೂ. ಭರವಸೆ -ಸಭಾಪತಿ ಹೊರಟ್ಟಿ

# ಸಂವಿಧಾನ ರಚಿಸಿದ ಮಹಾನ್ ಮೇಧಾವಿ ಅಂಬೇಡ್ಕರ್

ಧಾರವಾಡ: ದೇಶದಲ್ಲಿ ಕ್ರಾಂತಿ ಮಾಡಿದವರನ್ನು ನಾವು ನೆನೆಯಬೇಕು. ಅದರಲ್ಲಿ ಅಂಬೇಡ್ಕರ್ ಅವರ ಹೆಸರು ಮುಂಚೂಣಿಯಲ್ಲಿದೆ. ಈ ದೇಶದ ಸಂವಿಧಾನವನ್ನು ರಚಿಸಿದ ಮಹಾನ್ ಮೇಧಾವಿ ಅಂಬೇಡ್ಕರ್ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರ 131ನೇ ಜನ್ಮ ದಿನದ ಅಂಗವಾಗಿ ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆ, ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ಹಾಗೂ ಕರ್ನಾಟಕ ವಿಶ್ವವಿದ್ಯಾಲಯ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ವಿಭಾಗ, ಮಾನವಶಾಸ್ತ್ರ ವಿಭಾಗದ ಆಶ್ರಯದಲ್ಲಿ ಕವಿವಿ ಆವರಣದ ಸುವರ್ಣ ಮಹೋತ್ಸವ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಅಂಬೇಡ್ಕರ್ ಅವರು ಅಂದಿನ ಕಾಲದಲ್ಲಿ ಹಲವು ಸಂಕಷ್ಟಗಳನ್ನು ಎದುರಿಸಿ ಶಿಕ್ಷಣ ಪಡೆದು ನಮ್ಮ ದೇಶಕ್ಕೆ ಸಂವಿಧಾನ ರಚಿಸುವ ಮೂಲಕ ಎಲ್ಲ ಸಂಕೋಲೆಗಳಿಂದ ಮುಕ್ತಿ ನೀಡಿದವರು ಅಂಬೇಡ್ಕರ್. ಈ ಹಿಂದೆ ತಳ ಸಮುದಾಯದವರು ಅನುಭವಿಸಿದ ಕಷ್ಟಗಳನ್ನು ಯುವ ಸಮುದಾಯ ಓದುವ ಮೂಲಕ ತಿಳಿದುಕೊಳ್ಳಬೇಕು. ಹಿಂದಿನ ಪೀಳಿಗೆಗಳು ಅನುಭವಿಸಿದ ಕಷ್ಟ ಹಾಗೂ ಹೋರಾಟಗಳನ್ನು ಯುವ ಸಮುದಾಯ ಅರಿಯಬೇಕು. ನಮ್ಮ ಸಮಾಜದಲ್ಲಿ ಇನ್ನೂ ಇರುವ ಕೆಟ್ಟ ಸಂಪ್ರದಾಯಗಳನ್ನು ತೊಡೆದು ಹಾಕಲು ಯುವ ಸಮುದಾಯ ಪಣ ತೊಡಬೇಕು ಎಂದರು.




ಡಾ. ಬಿ.ಆರ್. ಅಂಬೇಡ್ಕರ್ ಅವರ 131ನೇ ಜನ್ಮ ದಿನದ ಅಂಗವಾಗಿ ಕರ್ನಾಟಕ ವಿಶ್ವವಿದ್ಯಾಲಯ ಆವರಣದ ಸುವರ್ಣ ಮಹೋತ್ಸವ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿ ಮಾತನಾಡಿದರು.

ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡಿಸುವಲ್ಲಿ ಸಾವಿತ್ರಿಬಾಯಿ ಫುಲೆ ಅವರ ಪಾತ್ರ ಮಹತ್ವದ್ದಾಗಿದೆ. ಮುಸ್ಲಿಂ ಸಮುದಾಯದಲ್ಲಿ ಫಾತಿಮಾ ಎಂಬುವವರು ಮುಸ್ಲಿಂ ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡಲು ಯತ್ನಿಸಿದ್ದಾರೆ. ಶಿಕ್ಷಣಕ್ಕೆ ಇರುವ ಮಹತ್ವ ಮತ್ಯಾವುದಕ್ಕೂ ಇಲ್ಲ. ಶಿಕ್ಷಣದಿಂದ ಕ್ರಾಂತಿ ಮಾಡಲು ಸಾಧ್ಯ. ಸಮ್ಮೇಳನ ಮೂಲಕ ಜನರ ಸಂಕಷ್ಟಗಳಿಗೆ ಧ್ವನಿಯಾಗಬೇಕು. ಸಮುದಾಯಕ್ಕೆ ನೆಲೆ ನೀಡುವಲ್ಲಿ, ಶಕ್ತಿ ತುಂಬುವಲ್ಲಿ ಈ ಸಮ್ಮೇಳನ ನಾಂದಿಯಾಗಬೇಕು. ಸಮ್ಮೇಳನದ ಗೋಷ್ಠಿಗಳ ವಿವರವನ್ನು ಸರ್ಕಾರಕ್ಕೆ ಸಲ್ಲಿಸಬೇಕು. ಇದರಿಂದ ತಳ ಸಮುದಾಯದ ಮಕ್ಕಳ ಅಭಿವೃದ್ಧಿಗೆ ಶ್ರಮಿಸಿ, ಸಮಾಜದಲ್ಲಿನ ಅಪಸ್ವರಗಳನ್ನು ಸರಿಪಡಿಸಲು ಪ್ರಯತ್ನಿಸಬೇಕು. ಅಂಬೇಡ್ಕರ್ ವಸ್ತು ಸಂಗ್ರಹಾಲಯ ನಿರ್ಮಾಣಕ್ಕೆ 28 ಕೋಟಿ ರೂ. ಸರ್ಕಾರದಿಂದ ಕೊಡಿಸುವುದಾಗಿ ಭರವಸೆ ನೀಡಿದರು.

ಮುಂಬಯಿ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಪಿ.ಜಿ. ಜೋಗದಂಡ ಸಮ್ಮೇಳನದ ದಿಕ್ಸೂಚಿ ಭಾಷಣ ಮಾಡಿ, ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಇಂದು ಅವರನ್ನು ಪ್ರತಿಮೆಗಳಿಗೆ ಮಾತ್ರ ಸಮೀತಿಗೊಳಿಸಿದ್ದೇವೆ. ಅಂಬೇಡ್ಕರ ಅವರನ್ನು ಅವರ ಪುಸ್ತಕ ಮತ್ತು ಬರಹಗಳಲ್ಲಿ ಕಾಣಬೇಕು. ಅಂಬೇಡ್ಕರ್ ಅವರು ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಾಪನೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದು, ಅವರ ಮಹತ್ವದ ಕೃತಿಯಾದ ದಿ ಪ್ರಾಬ್ಲಮ್ ಆಫ್ ರೂಪಿ ಈಗ ನೂರು ವರ್ಷಗಳನ್ನು ಪೂರೈಸಿದೆ. ದೇಶದಲ್ಲಿ ಜಾತಿ ನಾಶವಾಗದ ಹೊರತು ದೇಶದ ಪ್ರಗತಿ ಅಸಾಧ್ಯ ಎಂದರು.

ಶಾಸಕ ಅರವಿಂದ ಬೆಲ್ಲದ ಮಾತನಾಡಿ, ಅಂಬೇಡ್ಕರ್ ಅವರು ಹಾಕಿ ಕೊಟ್ಟ ಮಾರ್ಗದರ್ಶನ, ತತ್ವ ಮತ್ತು ಆದರ್ಶಗಳನ್ನು ಮುನ್ನಡಸಿಕೊಂಡು ಹೋಗಬೇಕಾಗಿದೆ. ಇಂದು ಹಿಂದುಳಿದ ಧಮನಿತ ವರ್ಗಗಳ ಜನರು ಉನ್ನತ ಹುದ್ದೆ ಮತ್ತು ಉನ್ನತ ಸ್ಥಾನವನ್ನು ಅಲಂಕರಿಸಬೇಕು. ಜಾತಿ ವ್ಯವಸ್ಥೆ ದೇಶದ ಪ್ರಗತಿಗೆ ಮಾರಕವಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕವಿವಿ ಕುಲಪತಿ ಪ್ರೊ. ಕೆ.ಬಿ. ಗುಡಸಿ ಮಾತನಾಡಿ, ಅಂಬೇಡ್ಕರ್ ಅವರು ಸಮಾಜದ ಎಲ್ಲ ವರ್ಗಗಳ ಕಲ್ಯಾಣಕ್ಕೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ. ಇಂದು ಅಂಬೇಡ್ಕರ ಅವರನ್ನು ಕೇವಲ ಭಾವನಾತ್ಮಕವಾಗಿ ನೋಡುತ್ತಿದ್ದು, ಅವರನ್ನು ದೇವರನ್ನಾಗಿ ಮಾಡಿದ್ದೇವೆ ಹೊರತು ಅವರ ವಿಚಾರ ತತ್ವ ಆದರ್ಶಗಳನ್ನು ಅಳವಡಿಸಿಕೊಳ್ಳಲು ವಿಫಲರಾಗಿದ್ದೇವೆ ಎಂದರು.

ಅರುಣ ಜೋಶಿ, ಕವಿವಿ ಅಂಬೇಡ್ಕರ ಅಧ್ಯಯನ ಪೀಠದ ಸಂಯೋಜಕ ಡಾ. ಸುಭಾಷಚಂದ್ರ ನಾಟೀಕಾರ, ಮಾನವಶಾಸ್ತ್ರ ಅಧ್ಯಯನ ಪೀಠದ ಮುಖ್ಯಸ್ಥ ಟಿ.ಟಿ. ಬಸವನಗೌಡ, ಕೆಪಿಎಸ್‌ಸಿ ಸದಸ್ಯ ಡಾ. ಮಹದೇವ ಹೆಗ್ಗಣ್ಣವರ, ಬುಡಕಟ್ಟು ಕಲ್ಯಾಣ ಇಲಾಖೆ ನಿರ್ದೇಶಕ ಕಾಂತರಾಜು, ಡಾ. ಈ. ವೆಂಕಟಯ್ಯ, ಎಂ. ವೆಂಕಟಸ್ವಾಮಿ, ಮಾವಳ್ಳಿ ಶಂಕರ್, ಡಾ. ಎನ್. ಮೂರ್ತಿ, ಚಳುವಳಿ ರಾಜಣ್ಣ, ಸಿರಿಗೇರಿ ತಿಪ್ಪೇಶ್, ಮುಕುಂದರಾವ್ ಭವಾನಿಮಠ, ಡಾ. ಸದಾಶಿವ ಮರ್ಜಿ, ಕವಿವಿ ಮೌಲ್ಯಮಾಪನ ಕುಲಸಚಿವ ಪ್ರೊ. ಸಿ. ಕೃಷ್ಣಮೂರ್ತಿ ಇದ್ದರು.

# ಈ ಬಾರಿ ಮಹದಾಯಿ ನೀರು ಬರಲಿದೆ; ಹೊರಟ್ಟಿ ವಿಶ್ವಾಸ

ಧಾರವಾಡ: ಮಹದಾಯಿ ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ಕೊಟ್ಟರೂ ಗೋವಾ ರಾಜ್ಯ ಸರ್ಕಾರ ತಕರಾರು ತೆಗೆದಿದೆ. ಕಾನೂನು ಪ್ರಕಾರ ಅವರಿಗೆ ಯಾವುದೇ ಹಕ್ಕಿಲ್ಲ. ಅದಕ್ಕೆ ಅಷ್ಟು ಮಹತ್ವ ಕೊಡಬೇಕಿಲ್ಲ. ಈ ಬಾರಿ ಖಂಡಿತ ನೀರು ಬರಲಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆ ಸಂದರ್ಭದಲ್ಲಿ ಮಹದಾಯಿ ನೀರಿನ ವಿಚಾರ ಮುನ್ನೆಲೆಗೆ ಬರುತ್ತದೆ. ಈಗ ಯೋಜನೆ ಜಾರಿ ಹಂತಕ್ಕೆ ಬಂದಿದ್ದು, ನೀರು ಹರಿದರೆ ಸಮಸ್ಯೆ ಪರಿಹಾರ ಕಾಣಲಿದೆ ಎಂದರು.

ಕಳೆದ ಆರು ತಿಂಗಳಿಂದ ಯಾವ ಪಕ್ಷದ ಜನಪ್ರತಿನಿಧಿಗಳೂ ಅಭಿವೃದ್ಧಿ ವಿಷಯದ ಬಗ್ಗೆ ಮಾತನಾಡಿಲ್ಲ. ಒಬ್ಬರ ಮೇಲೆ ಮತ್ತೊಬ್ಬರು ಆರೋಪ, ಪ್ರತ್ಯಾರೋಪ ಇದೆ ನಡೆದಿದೆ. ನಮ್ಮ ಮತದಾರರು ಚುನಾವಣೆ ಬಂದಾಗ ತಿಳಿದು ಮತದಾನ ಮಾಡಬೇಕು. ಉತ್ತಮ ಆಡಳಿತ ಕೊಡುವ ಸರ್ಕಾರ ಬರಲು ಇದು ಸಹಾಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರ ಸ್ವಾಮೀಜಿಗಳು ರಾಜಕಾರಣಕ್ಕೆ ಬರಬೇಕು ಎಂದು ಹೇಳಿಕೆ ನೀಡಿದ್ದಾರಲ್ಲ ಎಂಬ ಪ್ರಶ್ನೆಗೆ, ಹೇಳಿಕೆಗೆ ಪ್ರತಿಕ್ರಿಸಿದ ಹೊರಟ್ಟಿ, ಈ ಬಗ್ಗೆ ನಾನು ಹೇಳುವುದು ಸೂಕ್ತವಲ್ಲ ಎಂದಷ್ಟೇ ನುಡಿದರು.

Hubli Edition
Feb 26, 2023 Page No. 11
Powered by : eReleGo.com

ಹೊಸದಿಗಂತ

2

26 Feb 2023

# ಕನ್ನಡ ಶಾಲೆಗಳ ಅಸ್ತಿತ್ವ ಕಾಪಾಡಿ: ಹೊರಟ್ಟಿ



**ಹುಬ್ಬಳ್ಳಿ:** ಶಿಕ್ಷಕರು ಸಮಯ ಪಾಲನೆ ಜೊತೆಗೆ ಕನ್ನಡ ಮಾಧ್ಯಮ ಶಾಲೆಗಳ ಅಭಿವೃದ್ಧಿ ಹಾಗೂ ಅಸ್ತಿತ್ವವನ್ನು ಕಾಪಾಡಲು ಶ್ರಮಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಇಲ್ಲಿಯ ಲ್ಯಾಮಿಂಗ್ಟನ್ ಪ್ರೌಢ ಶಾಲೆಯಲ್ಲಿ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ ಶಹರ ಹಾಗೂ ಗ್ರಾಮೀಣ ಘಟಕ, ಕರ್ನಾಟಕ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ ಹಾಗೂ ಕ್ಷೇತ್ರ, ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಹರ ಹಾಗೂ ಗ್ರಾಮೀಣ ವಲಯದ ಸಹಯೋಗದಲ್ಲಿ ಏರ್ಪಡಿಸಿದ್ದ ಮಕ್ಕಳಲ್ಲಿ ಪರೀಕ್ಷಾ ಭೀತಿ ನಿವಾರಣೆಯಲ್ಲಿ ಶಿಕ್ಷಕರ ಪಾತ್ರ ಎಂಬ ವಿಷಯದ ಕುರಿತ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

ಅಧಿಕಾರಿಗಳು, ಸಿಬ್ಬಂದಿವರ್ಗದವರು ಶಿಸ್ತಿನಿಂದ ಸಮಯ ಹಾಗೂ ಕಾರ್ಯ ತತ್ಪರತೆ ಪರಿಪಾಲನೆ ಮಾಡುವುದು ಬಹಳ ಮುಖ್ಯ. ಇಲ್ಲವಾದಲ್ಲಿ ಮುಂದಿನ ದಿನಮಾನಗಳಲ್ಲಿ ಕಷ್ಟದ ದಿನಗಳನ್ನು ಎದುರಿಸಬೇಕಾದಿತು ಎಂದು ಎಚ್ಚರಿಸಿದರು.

ಗದಗ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಂ.ಬಸಲಿಂಗಪ್ಪ ಮಾತನಾಡಿ, ಭಯ ಮತ್ತು ಭೀತಿಯ ವಿವರಣೆಯನ್ನು ತಿಳಿಸುತ್ತಾ ಮಕ್ಕಳಲ್ಲಿ ಇರುವಂತಹ ವಿವಿಧ ರೀತಿಯ ಕೌಶಲ್ಯಗಳನ್ನು ಗುರುತಿಸಿ ಮಕ್ಕಳಲ್ಲಿ ಆತ್ಮಸ್ಥೈರ್ಯವನ್ನು ತುಂಬಿ ಇರುವಂತಹ ಭೀತಿಯನ್ನು ಸುಲಭವಾಗಿ ನಿವಾರಣೆ ಮಾಡಬಹುದು ಎಂದು ಹೇಳಿದರು.

ಧಾರವಾಡ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ, ಸಂಗಮನಾಥ ಲೋಕಾಪುರ, ಶಹರ ಶಿಕ್ಷಣಾಧಿಕಾರಿ ಚೆನ್ನಪ್ಪಗೌಡರ, ಗ್ರಾಮೀಣ ವಲಯದ ಶಿಕ್ಷಣಾಧಿಕಾರಿ ಅಶೋಕ ಸಿಂದಿಗಿ, ಎಂ.ಎಸ್.ಶಿವಳ್ಳಿಮಠ, ಜಿ.ಆರ್.ಭಟ್ ಇದ್ದರು.

ಹೊಸದಿಗಂತ



26 Feb 2023

# ಕನ್ನಡ ಭಾಷೆಗೆ ಹೆಚ್ಚಿನ ಆದ್ಯತೆ ನೀಡಿ




**ಹುಬ್ಬಳ್ಳಿ:** ಕಾನೂನು ವಿದ್ಯಾರ್ಥಿಗಳು ಬರುವ ದಿನಗಳಲ್ಲಿ ನ್ಯಾಯಾಲಯದಲ್ಲಿ ಕನ್ನಡ ಭಾಷೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಅನ್ಯಾಯದ ವಿರುದ್ಧ ಕೋರ್ಟ್ ಮೆಟ್ಟಿಲೇರುವವರಿಗೆ ಪ್ರಾಮಾಣಿಕವಾಗಿ ನ್ಯಾಯ ಒದಗಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಇಲ್ಲಿಯ ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದಲ್ಲಿ ರಾಜ್ಯಮಟ್ಟದ 10ನೇ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ-2023ಗೆ ಚಾಲನೆ ನೀಡಿ ಮಾತನಾಡಿದ ಅವರು, ಗೊತ್ತಿಲ್ಲದ ವಿಷಯವನ್ನು ಕಲಿಯುವ ಆಸಕ್ತಿ ಇದ್ದರೆ ಏನು ಬೇಕಾದರೂ ಕಲಿಯಬಹುದು. ಜೀವನದಲ್ಲಿ ಅಸಾಧ್ಯವಾದದ್ದು ಯಾವುದಿಲ್ಲ. ನಾವು ಯಾವ ಕ್ಷೇತ್ರದಲ್ಲಿದ್ದರು ಸಹ ಉತ್ತಮ ಕೆಲಸ ಮಾಡಬೇಕು. ಮಾಡಿದ ಕೆಲಸ ನೆನಪು ಮಾಡಿಕೊಳ್ಳುವರು ಸಾಕಷ್ಟು ಜನರಿದ್ದಾರೆ ಎಂದರು.

ರಾಜ್ಯ ಸರ್ಕಾರ ಇತ್ತೀಚೆಗೆ ಎಲ್ಲಾ ಕಡೆ ಕನ್ನಡ ಕಡ್ಡಾಯ ಮಾಡಿದೆ. ಕಾನೂನು ವಿದ್ಯಾರ್ಥಿಗಳು ಈಗಿನಿಂದಲೇ ಕನ್ನಡ ಭಾಷೆಯಲ್ಲಿ ವಾದ, ವಿವಾದ ಮಂಡಿಸುವುದನ್ನು ಕಲಿಯಬೇಕು. ನಿಮಗೆ ಸಮಾಜದಲ್ಲಿ ಉತ್ತಮ ಕೆಲಸ ಮಾಡಲು ಅವಕಾಶವಿದೆ. ಅದನ್ನು ಸರಿಯಾಗಿ ಸದುಪಯೋಗಪಡಿಸಿಕೊಂಡು ಸಮಾಜಕ್ಕೆ ಒಳ್ಳೆಯ ಕೊಡುಗೆ ನೀಡಿ ಎಂದು ತಿಳಿಸಿದರು.

# ಕನ್ನಡದಲ್ಲೇ ವಾದ, ವಿವಾದ ಮಂಡಿಸಿ: ಹೊರಟ್ಟಿ

**ಹುಬ್ಬಳ್ಳಿ:** ಕಾನೂನು ವಿದ್ಯಾರ್ಥಿಗಳು ಈಗಿನಿಂದಲೇ ಕನ್ನಡ ಭಾಷೆಯಲ್ಲಿ ವಾದ, ವಿವಾದ ಮಂಡಿಸುವುದನ್ನು ಕಲಿಯಬೇಕು. ನಿಮ್ಮಗೆ ಸಮಾಜದಲ್ಲಿ ಉತ್ತಮ ಕೆಲಸ ಮಾಡಲು ಅವಕಾಶವಿದೆ. ಅದನ್ನು ಸರಿಯಾಗಿ ಸದುಪಯೋಗ ಪಡಿಸಿಕೊಂಡು ಸಮಾಜಕ್ಕೆ ಒಳ್ಳೆಯ ಕೊಡುಗೆ ನೀಡಿ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಇಲ್ಲಿಯ ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದಲ್ಲಿ ರಾಜ್ಯಮಟ್ಟದ 10ನೇ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ-2023ಗೆ ಚಾಲನೆ ನೀಡಿ ಮಾತನಾಡಿದರು.

ಕರ್ನಾಟಕ ಕಾನೂನು ವಿಶ್ವವಿದ್ಯಾಲಯದ ಕುಲಪತಿ ಡಾ. ಪ್ರೊ.ಸಿ. ಬಸವರಾಜ ಮಾತನಾಡಿ, ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ ಕಾನೂನು ವಿದ್ಯಾರ್ಥಿಗಳಿಗೆ ಅವಶ್ಯವಾಗಿದೆ.




ವಕೀಲರಾಗಿ ಹಾಗೂ ನ್ಯಾಯಾಧೀಶರಾಗಿ ರೂಪಿತವಾಗಬೇಕಾದರೆ ವಿದ್ಯಾರ್ಥಿಗಳಿಗೆ ಇಂತಹ ಶಿಕ್ಷಣ ನೀಡಬೇಕು ಎಂದರು.

ಕಾನೂನು ಕಲಿತ ವಿದ್ಯಾರ್ಥಿಗಳು ವಯಕ್ತಿಕ ಬದುಕಿಗೆ ಹಿಂದೆ ಹೋಗದೆ ನ್ಯಾಯಕ್ಕಾಗಿ ಕೋರ್ಟ್ ಬರುವ ಜನರಿಗೆ ನ್ಯಾಯ ಒದಗಿಸಬೇಕು. ಸ್ಪರ್ಧೆಯಲ್ಲಿ ಭಾಗವಹಿಸಲು ಸುಮಾರ 48 ಕಾಲೇಜಿನಿಂದ ವಿದ್ಯಾರ್ಥಿಗಳು ಬಂದಿದ್ದಾರೆ. ಬೇರೆ ಭಾಷೆ ಕಲಿಯಬೇಕು ಮಾತೃಭಾಷೆ ಮರೆಯಬಾರದು. ಸರ್ಕಾರ ಸೂಕ್ತ ನಿರ್ಧಾರ ತೆಗೆದುಕೊಂಡಿದೆ. ನ್ಯಾಯಲಯದಲ್ಲಿ ನಡೆಯುವ ಪ್ರತಿಯೊಂದು ಚರ್ಚೆ ಕನ್ನಡದಲ್ಲಿ ಭಾಷೆಯಲ್ಲಿ ನಡೆಯಬೇಕು. ಈ ನಿರ್ಧಾರಕ್ಕಾಗಿ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಕುಲಸಚಿವ ಮೊಹಮ್ಮದ್ ಝುಬೇರ ಎನ್., ಮೌಲ್ಯಮಾಪನ ಕುಲಸಚಿವರಾದ ಡಾ. ರತ್ನಾ ಆರ್ ಭರಮಗೌಡರ, ಡಾ. ಜಿ.ಬಿ. ಪಾಟೀಲ ಇದ್ದರು.

## ಪ್ರಜಾಪ್ರಭುತ್ವಕ್ಕೆ ಧಕ್ಕೆ

ಜನಪ್ರತಿನಿಧಿಗಳು ತಮ್ಮದೆಯಾದ ಸೇವೆ ಸಲ್ಲಿಸಬೇಕು. ಹಿಂದೆ ವಿಧಾನಸಭೆಯಲ್ಲಿ 20 ಜನ ವಕೀಲರಿರುತ್ತಿದ್ದರು. ಸದ್ಯ ಯಾರು ಇಲ್ಲ. ಇತ್ತೀಚಿಗೆ ಸದನದಲ್ಲಿ ನಡೆಯುತ್ತಿರುವ ಚರ್ಚೆಗಳನ್ನು ನೋಡಿದರೆ ಬೇಜಾರ ಆಗುತ್ತದೆ. ಇದು ಪ್ರಜಾಪ್ರಭುತ್ವಕ್ಕೆ ಧಕ್ಕೆಯಾಗಿದ್ದು, ಈ ಬಗ್ಗೆ ಮಾತನಾಡ ಪರಿಸ್ಥಿತಿ ಇದೆ. ಸದ್ಯ ಪ್ರಮಾಣಿಕವಾಗಿ ಮಾತನಾಡುವರಿಗೆ ಮೂರ್ಖರು ಎಂಬ ಭಾವನೆ ಇದೆ. ಆದರೆ, ಅಧಿಕಾರದಲ್ಲಿದ್ದಾಗ ಮಾಡಿದ ಕೆಲಸ ಶಾಶ್ವತವಾಗಿ ನೆನಪಿಡುವಂತೆ ಮಾಡಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಹೊಸದಿಗಂತ

## 10ನೇ ರಾಜ್ಯ ಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ ಉದ್ಘಾಟನೆ

# ರಾಜ್ಯ, ರಾಷ್ಟ್ರ ಪ್ರತಿನಿಧಿಸುವ ನ್ಯಾಯಾಧೀಶರಾಗಿ: ಸಭಾಪತಿ ಹೊರಟ್ಟಿ



**ಉದಯಕಾಲ ನ್ಯೂಸ್**

**ಹುಬ್ಬಳ್ಳಿ:** ವಿದ್ಯಾರ್ಥಿಗಳು ಭವಿಷ್ಯವನ್ನು ರೂಪಿಸಿಕೊಳ್ಳುವ ನಿಟ್ಟಿನಲ್ಲಿ ದಾಪುಗಾಲು ಇಡಬೇಕು. ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರವನ್ನು ಪ್ರತಿನಿಧಿಸುವ ನ್ಯಾಯಾಧೀಶರಾಗಿ ಬೆಳೆಯಬೇಕು ಎಂದು ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಹೇಳಿದರು.

ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ವತಿಯಿಂದ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 10ನೇ ರಾಜ್ಯ ಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕವಾದ ಸೇವೆ ನೀಡಬೇಕಾಗಿದೆ. ಕಾಯ್ದೆ, ಕಾನೂನುಗಳನ್ನು ಸರಿಯಾಗಿ ತಿಳಿದುಕೊಳ್ಳಬೇಕು. ನಾನು ಕಾನೂನು ಪದವಿ ಓದುವಾಗ ಎರಡನೇ ವರ್ಷದಲ್ಲಿ ಅನುತೀರ್ಣನಾದೆ. ಹೀಗಾಗಿ ಕಾನೂನು ಪದವಿಯನ್ನು ಪಡೆಯಲು ಸಾಧ್ಯವಾಗಲಿಲ್ಲ. ಕಾನೂನು ಮಂತ್ರಿಯಾಗಿದ್ದಾಗ ಎಲ್ಲವನ್ನೂ ತಿಳಿದುಕೊಂಡೆ. ಯುವ ವಕೀಲರಿಗೆ ಮಾಸಿಕ ರೂ. 2 ಸಾವಿರ ಕೊಡುವ ಕೆಲಸ ಮಾಡಿದೆ. ಜನರು ನಂಬಿಕೆ, ಭರವಸೆ ಇಟ್ಟುಕೊಂಡು ನಿಮ್ಮ ಹತ್ತಿರ ಬರುತ್ತಾರೆ. ಅವರ ನಂಬಿಕೆಗೆ ವಿರುದ್ಧವಾಗಿ ನಡೆಕೊಳ್ಳಬೇಡಿ. ಇಂದಿನಿಂದ ವಿದ್ಯಾರ್ಥಿಗಳು ಸ್ಪರ್ಧಾತ್ಮಕತೆಯನ್ನು ಬೆಳೆಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳು ಬೇರೆ ಬೇರೆ ವಿಷಯಗಳನ್ನು ಕಲಿಯುವ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು. ನಿಮ್ಮ ಆಸೆ ಆಕಾಂಕ್ಷೆಗಳನ್ನು ಈಡೇರಿಸಿಕೊಳ್ಳಿ. ಕನ್ನಡ ಕಡ್ಡಾಯ ಬಿಲ್ ಪಾಸ್ ಮಾಡಲಾಗಿದೆ. ಕನ್ನಡದಲ್ಲಿ ತೀರ್ಪು ಕೊಡುವ ನಿಯಮಗಳನ್ನು ಜಾರಿಗೆ ತರಲಾಗುವುದು. ಇದರಿಂದ ಕಕ್ಷಿದಾರರಿಗೆ ಅನುಕೂಲವಾಗಲಿದೆ ಎಂದರು. ವಿಶ್ವವಿದ್ಯಾಲಯದ ಕುಲಪತಿ ಡಾ.ಸಿ.ಬಸವರಾಜು ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಣುಕು ನ್ಯಾಯಾಲಯ ಸ್ಪರ್ಧೆ ವಿದ್ಯಾರ್ಥಿಗಳಿಗೆ ಅನಿವಾರ್ಯವಾಗಿದೆ. ನ್ಯಾಯಾಧೀಶರಾಗಿ ರೂಪಗೊಳ್ಳಲು ಸಹಾಯಕವಾಗಲಿದೆ. ಉತ್ತಮ ನ್ಯಾಯಾವಾದಿಗಳಾಗಲು ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಸಮಾಜದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಸಮಾಜದಲ್ಲಿನ ಸಮಸ್ಯೆಗಳಿಗೆ ಹೇಗೆ ಸ್ಪಂದಿಸುತ್ತೀರಿ ಎಂಬುದನ್ನು ಕಲಿಯಬಹುದು. ವಕೀಲರಾಗಿ ಜನಪರ ಸೇವೆ ಸಲ್ಲಿಸಲು ಅಣಿಯಾಗಬೇಕು. ಮಾತೃಭಾಷೆಯನ್ನು ಬಳಸಿ, ಆದರೆ ಇಂಗ್ಲೀಷ್ ಕೂಡ ಅವಶ್ಯಕವಾಗಿದೆ. ಕಕ್ಷಿದಾರರಿಗೂ ಸಹ ತೀರ್ಪಿನ ಬಗ್ಗೆ ಅರ್ಥವಾಗಬೇಕು. ವಿದ್ಯಾರ್ಥಿಗಳು ಉತ್ಸಾಹದಿಂದ ಸ್ಪರ್ಧೆಗಳಲ್ಲಿ ಭಾಗವಹಿಸಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವರಾದ ಮೊಹಮದ್ ಝುಬೇರ ಎನ್, ಮೌಲ್ಯಮಾಪನ ಕುಲಸಚಿವೆ ಡಾ.ರತ್ನಾ ಆರ್ ಭರಮಗೌಡರ, ಪ್ರೊ.ಸಿ.ಎಸ್. ಪಾಟೀಲ, ಬಸವಪ್ರಭು ಹೊಸಕೇರಿ, ಅಧ್ಯಾಪಕರು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಹಾಜರಿದ್ದರು.

ಪ್ರಮತಿ ಹುಣಸಗಿ ಪ್ರಾರ್ಥಿಸಿದರು. ವಿವಿಯ ಡೀನ್ ಡಾ.ಜಿ.ಬಿ. ಪಾಟೀಲ ಸ್ವಾಗತಿಸಿದರು. ಸ್ಫೂರ್ತಿ ಬಸಾಪೂರ ನಿರೂಪಿಸಿದರು.

ಈ ಸಂಜೆ

# 10ನೇ ರಾಜ್ಯ ಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ

# ರಾಷ್ಟ್ರವನ್ನು ಪ್ರತಿನಿಧಿಸುವ ನ್ಯಾಯಾಧೀಶರಾಗಿ ಬೆಳೆಯಿರಿ

## ವಿದ್ಯಾರ್ಥಿಗಳಿಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಲಹೆ

**ಹುಬ್ಬಳ್ಳಿ, ಫೆ.25:** ವಿದ್ಯಾರ್ಥಿಗಳು ಭವಿಷ್ಯವನ್ನು ರೂಪಿಸಿಕೊಳ್ಳುವ ನಿಟ್ಟಿನಲ್ಲಿ ದಾಪುಗಾಲು ಇಡಬೇಕು. ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರವನ್ನು ಪ್ರತಿನಿಧಿಸುವ ನ್ಯಾಯಾಧೀಶರಾಗಿ ಬೆಳೆಯಬೇಕು ಎಂದು ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಹೇಳಿದರು.

ಇಂದು ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ವತಿಯಿಂದ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 10ನೇ ರಾಜ್ಯ ಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕವಾದ ಸೇವೆ ನೀಡಬೇಕಾಗಿದೆ. ಕಾಯ್ದೆ, ಕಾನೂನುಗಳನ್ನು ಸರಿಯಾಗಿ ತಿಳಿದುಕೊಳ್ಳಬೇಕು. ನಾನು ಕಾನೂನು ಪದವಿ ಓದುವಾಗ ಎರಡನೇ ವರ್ಷದಲ್ಲಿ ಅನುತೀರ್ಣನಾದೆ. ಹೀಗಾಗಿ ಕಾನೂನು ಪದವಿಯನ್ನು ಪಡೆಯಲು ಸಾಧ್ಯವಾಗಲಿಲ್ಲ. ಕಾನೂನು ಮಂತ್ರಿಯಾಗಿದ್ದಾಗ ಎಲ್ಲವನ್ನೂ ತಿಳಿದುಕೊಂಡೆ. ಯುವ ವಕೀಲರಿಗೆ ಮಾಸಿಕ ರೂ. 2 ಸಾವಿರ ಕೊಡುವ ಕೆಲಸ ಮಾಡಿದೆ. ಜನರು ನಂಬಿಕೆ, ಭರವಸೆ ಇಟ್ಟುಕೊಂಡು ನಿಮ್ಮ ಹತ್ತಿರ ಬರುತ್ತಾರೆ. ಅವರ ನಂಬಿಕೆಗೆ ವಿರುದ್ಧವಾಗಿ



ನಡೆಕೊಳ್ಳಬೇಡಿ. ಇಂದಿನಿಂದ ವಿದ್ಯಾರ್ಥಿಗಳು ಸ್ಪರ್ಧಾತ್ಮಕತೆಯನ್ನು ಬೆಳೆಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳು ಬೇರೆ ಬೇರೆ ವಿಷಯಗಳನ್ನು ಕಲಿಯುವ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು. ನಿಮ್ಮ ಆಸೆ ಆಕಾಂಕ್ಷೆಗಳನ್ನು ಈಡೇರಿಸಿಕೊಳ್ಳಿ, ಕನ್ನಡ ಕಡ್ಡಾಯ ಬಿಲ್ ಪಾಸ್ ಮಾಡಲಾಗಿದೆ. ಕನ್ನಡದಲ್ಲಿ ತೀರ್ಪು ಕೊಡುವ ನಿಯಮಗಳನ್ನು ಜಾರಿಗೆ ತರಲಾಗುವುದು. ಇದರಿಂದ ಕಕ್ಷಿದಾರರಿಗೆ ಅನುಕೂಲವಾಗಲಿದೆ. ಬೆಂಗಳೂರಿನಲ್ಲಿ ಶೇ.23 ರಷ್ಟು ಜನರು ಕನ್ನಡ ಮಾತನಾಡುವವರಿದ್ದಾರೆ. ಕಾನೂನು ಮಂತ್ರಿಯಾಗಿದ್ದಾಗ ಹಾಸನ, ಶಿವಮೊಗ್ಗಕ್ಕೆ ಈ ವಿವಿಯು ಹೋಗುತ್ತಿತ್ತು. ನಂತರ ವಿವಿಧ ಮುಖಂಡರ ಜೊತೆ ಚರ್ಚಿಸಿದ ಬಳಿಕ ಹುಬ್ಬಳ್ಳಿಗೆ ವಿವಿಯನ್ನು ತರಲಾಯಿತು. ಕನ್ನಡವನ್ನು ಉಳಿಸಿ ಬೆಳೆಸುವ ಕಾರ್ಯ ಮಾಡಿರಿ. ವಿದ್ಯಾರ್ಥಿಗಳು ನಾಡಿಗೆ ಶಕ್ತಿಯಾಗಿ ಬೆಳೆಯಬೇಕು ಎಂದು ತಿಳಿಸಿದರು.

ವಿಶ್ವವಿದ್ಯಾಲಯದ ಕುಲಪತಿ ಡಾ.ಸಿ.ಬಸವರಾಜು ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಣುಕು ನ್ಯಾಯಾಲಯ ಸ್ಪರ್ಧೆ ವಿದ್ಯಾರ್ಥಿಗಳಿಗೆ ಅನಿವಾರ್ಯವಾಗಿದೆ. ನ್ಯಾಯಾಧೀಶರಾಗಿ ರೂಪಗೊಳ್ಳಲು ಸಹಾಯಕವಾಗಲಿದೆ. ಉತ್ತಮ ನ್ಯಾಯವಾದಿಗಳಾಗಲು ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಸಮಾಜದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಸಮಾಜದಲ್ಲಿನ ಸಮಸ್ಯೆಗಳಿಗೆ ಹೇಗೆ ಸ್ಪಂದಿಸುತ್ತೀರಿ ಎಂಬುದನ್ನು ಕಲಿಯಬಹುದು. ವಕೀಲರಾಗಿ ಜನಪರ ಸೇವೆ ಸಲ್ಲಿಸಲು ಅಣಿಯಾಗಬೇಕು. ಮಾತೃಭಾಷೆಯನ್ನು ಬಳಸಿ, ಆದರೆ ಇಂಗ್ಲೀಷ್ ಕೂಡ ಅವಶ್ಯಕವಾಗಿದೆ. ಕಕ್ಷಿದಾರರಿಗೂ ಸಹ ತೀರ್ಪಿನ ಬಗ್ಗೆ ಅರ್ಥವಾಗಬೇಕು. ವಿದ್ಯಾರ್ಥಿಗಳು ಉತ್ಸಾಹದಿಂದ ಸ್ಪರ್ಧೆಗಳಲ್ಲಿ ಭಾಗವಹಿಸಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವರಾದ ಮೊಹಮದ್ ಝುಬೇರ ಎನ್, ಮೌಲ್ಯಮಾಪನ ಕುಲಸಚಿವೆ ಡಾ.ರತ್ನಾ ಆರ್ ಭರಮಗೌಡರ, ಪ್ರೊ.ಸಿ.ಎಸ್. ಪಾಟೀಲ, ಬಸವಪ್ರಭು ಹೊಸಕೇರಿ, ಅಧ್ಯಾಪಕರು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಹಾಜರಿದ್ದರು.

# ನಂಬಿಕೆಗೆ ವಿರುದ್ಧ ನಡೆದುಕೊಳ್ಳಬೇಡಿ: ಹೊರಟ್ಟಿ

## ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆ ಉದ್ಘಾಟನೆ



ಹುಬ್ಬಳ್ಳಿ: ವಿದ್ಯಾರ್ಥಿಗಳು ಭವಿಷ್ಯವನ್ನು ರೂಪಿಸಿಕೊಳ್ಳುವ ನಿಟ್ಟಿನಲ್ಲಿ ದಾಪುಗಾಲು ಇಡಬೇಕು. ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರವನ್ನು ಪ್ರತಿನಿಧಿಸುವ ನ್ಯಾಯಾಧೀಶರಾಗಿ ಬೆಳೆಯಬೇಕು ಎಂದು ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಇಂದು ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ವತಿಯಿಂದ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 10ನೇ ರಾಜ್ಯ ಮಟ್ಟದ ಕನ್ನಡ ಕಲ್ಪಿತ ನ್ಯಾಯಾಲಯ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿ,

ದೇಶದ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕವಾದ ಸೇವೆ ನೀಡಬೇಕಾಗಿದೆ. ಕಾಯ್ದೆ, ಕಾನೂನುಗಳನ್ನು ಸರಿಯಾಗಿ ತಿಳಿದುಕೊಳ್ಳಬೇಕು. ಕಾನೂನುಮಂತ್ರಿ ಯಾಗಿದ್ದಾಗ ನಾನು ಯುವ ವಕೀಲರಿಗೆ ಮಾಸಿಕ ರೂ. 2 ಸಾವಿರ ಕೊಡುವ ಕೆಲಸ ಮಾಡಿದೆ. ಜನರು ನಂಬಿಕೆ, ಭರವಸೆ ಇಟ್ಟುಕೊಂಡು ನಿಮ್ಮ ಹತ್ತಿರ ಬರುತ್ತಾರೆ. ಅವರ ನಂಬಿಕೆಗೆ ವಿರುದ್ಧವಾಗಿ ನಡೆದುಕೊಳ್ಳಬೇಡಿ. ಇಂದಿನಿಂದ ವಿದ್ಯಾರ್ಥಿಗಳು ಸ್ಪರ್ಧಾತ್ಮಕತೆಯನ್ನು ಬೆಳೆಸಿಕೊಳ್ಳಬೇಕು ಎಂದರು.

ವಿಶ್ವವಿದ್ಯಾಲಯದ ಕುಲಪತಿ ಡಾ.ಸಿ.ಬಸವರಾಜು ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಣುಕು ನ್ಯಾಯಾಲಯ ಸ್ಪರ್ಧೆ ವಿದ್ಯಾರ್ಥಿಗಳಿಗೆ ಅನಿವಾರ್ಯವಾಗಿದೆ. ನ್ಯಾಯಾಧೀಶರಾಗಿ ರೂಪಗೊಳ್ಳಲು ಸಹಾಯಕವಾಗಲಿದೆ. ಎಂದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವ ರಾದ ಮೊಹಮದ್ ಝುಬೇರ ಎನ್, ಮೌಲ್ಯಮಾಪನ ಕುಲಸಚಿವೆ ಡಾ.ರತ್ನಾ ಆರ್ ಭರಮಗೌಡರ, ಪ್ರೊ.ಸಿ.ಎಸ್. ಪಾಟೀಲ, ಬಸವಪ್ರಭು ಹೊಸಕೇರಿ, ಅಧ್ಯಾಪಕರು, ವಿವಿಧ ಕಾಲೇಜುಗಳ ವಿದ್ಯಾರ್ಥಿ ಗಳು ಹಾಜರಿದ್ದರು. ಪ್ರಮತಿ ಹುಣಸಗಿ ಪ್ರಾರ್ಥಿಸಿದರು. ವಿವಿಯ ಡೀನ್ ಡಾ.ಜಿ.ಬಿ. ಪಾಟೀಲ ಸ್ವಾಗತಿಸಿದರು. ಸ್ಫೂರ್ತಿ ಬಸಾಪೂರ ನಿರೂಪಿಸಿದರು.